## ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

ವಿಷಯ:- ರಾಯಚೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಕುಡಿಯುವ ನೀರಿಗಾಗಿ ಕೃಷ್ಣಾ ನದಿಯಿಂದ ಗಣೇಕಲ್ ಸಮತೋಲನ ಜಲಾಶಯಕ್ಕೆ ನೀರು ಪೂರೈಸುವ ರೂ.189.22 ಕೋಟಿಗಳ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ಗಣೇಕಲ್ ಜಲಾಶಯ/2019/1834, ದಿನಾಂಕ:12.07.2019 ಮತ್ತು ಪತ್ರ ಸಂಖ್ಯೆ:2795, ದಿನಾಂಕ:30.08.2019.

---***---

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ಗಣೇಕಲ್ ಜಲಾಶಯದ ಕೆಳಭಾಗದಲ್ಲಿ ಬರುವ ರಾಯಚೂರು ನಗರ ಹಾಗೂ ಸುತ್ತಮುತ್ತಲಿನ ಗ್ರಾಮಗಳಾದ ಗಣೇಕಲ್, ಮಲ್ಲದಕಲ್ ರಾಮದುರ್ಗ, ಜಗತಕಲ್, ಬುಡ್ಡಿನ್ನಿ, ಕರಡಿಗುಡ್ಡ, ಅಗ್ರಹಾರ, ಗಗಲದಿನ್ನಿ, ಮರಕ್ಮದಿನ್ನಿ, ಮಗದದಿನ್ನಿ ಮತ್ತು ಹೆಗ್ಗಡದಿನ್ನಿಗಳಿಗೆ ಕುಡಿಯುವ ನೀರಿನ ತೊಂದರೆಯಾಗುತ್ತಿರುವುದರಿಂದ, ಸದರಿ ಗ್ರಾಮಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸುವ ಸಲುವಾಗಿ, ಕೃಷ್ಣಾ ನದಿಯಿಂದ ಗಣೇಕಲ್ ಸಮತೋಲನ ಜಲಾಶಯಕ್ಕೆ ನೀರು ಪೂರೈಸಲು, 2018-19ನೇ ಸಾಲಿನ ದರಪಟ್ಟಿಯನ್ವಯ ರೂ.189.22 ಕೋಟಿಗಳಿಗೆ ಯೋಜನೆಯ ಅಂದಾಜನ್ನು ತಯಾರಿಸಿ, ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ತಿಳಿಸಿರುತ್ತಾರೆ. ಸದರಿ ಯೋಜನೆಯನ್ನು 2019-20ನೇ ಆಯವ್ಯಯದಲ್ಲಿ ಘೋಷಿಸಲಾಗಿದೆ.

ಸದರಿ ಯೋಜನೆಯ ಪ್ರಸ್ತಾವನೆಯನ್ನು ದಿನಾಂಕ:20.06.2019 ರಂದು ನಡೆದ ಕರ್ನಾಟಕ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 57ನೇ ಸಭೆಯಲ್ಲಿ ಮಂಡಿಸಲಾಗಿದ್ದು, ಸಮಿತಿಯು ತೀರುವಳಿ ನೀಡಿ, ಸದರಿ ವಿವರವಾದ ಯೋಜನಾ ವರದಿಗೆ ಕರ್ನಾಟ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ತಿಳಿಸಿರುತ್ತಾರೆ.

ದಿನಾಂಕ:09.07.2019ರಂದು ಜರುಗಿನ ನಿಗಮದ ನಿರ್ದೇಶಕರ ಮಂಡಳಿಯ 88ನೇ ಸಭೆಯಲ್ಲಿ ಮಂಡಿಸಲಾಗಿ, ರೂ.189.22ಕೋಟಿಗಳ ಪ್ರಸ್ತಾವನೆಗೆ ಮಂಡಳಿಯು ಅನುಮೋದನೆ ನೀಡುತ್ತಾ, ಸರ್ಕಾರದ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ತಿಳಿಸಿರುತ್ತಾರೆ.

ಅದರಂತೆ, ಗಣೇಕಲ್ ಜಲಾಶಯದ ಕೆಳಭಾಗದಲ್ಲಿ ಬರುವ ರಾಯಚೂರು ನಗರ ಹಾಗೂ ಸುತ್ತಮುತ್ತಲಿನ ಗ್ರಾಮಗಳಾದ ಗಣೇಕಲ್, ಮಲ್ಲದಕಲ್ ರಾಮದುರ್ಗ, ಜಗತಕಲ್, ಬುಡ್ಡಿನ್ನಿ, ಕರಡಿಗುಡ್ಡ, ಅಗ್ರಹಾರ, ಗಗಲದಿನ್ನಿ, ಮರಕ್ಮದಿನ್ನಿ, ಮಗದದಿನ್ನಿ ಮತ್ತು ಹೆಗ್ಗಡದಿನ್ನಿಗಳಿಗೆ ಕುಡಿಯುವ ನೀರಿಗಾಗಿ ಕೃಷ್ಣಾ ನದಿಯಿಂದ ಗಣೇಕಲ್ ಸಮತೋಲನ ಜಲಾಶಯಕ್ಕೆ ನೀರು ಪೂರೈಸುವ ರೂ.189.22 ಕೋಟಿಗಳ (ನೂರಾ ಎಂಬತ್ತೊಂಬತ್ತು ಕೋಟಿ ಇಪ್ಪತ್ತೆರಡು ಲಕ್ಷ ರೂಪಾಯಿಗಳು ಮಾತ್ರ) ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಜಸಂಇ 105 ಎಂಟಿಪಿ 2017 ಬೆಂಗಳೂರು,
ದಿನಾಂಕ:25.10.2019

ರಾಯಚೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಕುಡಿಯುವ ನೀರಿಗಾಗಿ ಕೃಷ್ಣಾ ನದಿಯಿಂದ ಗಣೇಕಲ್ ಸಮತೋಲನ ಜಲಾಶಯಕ್ಕೆ ನೀರು ಪೂರೈಸುವ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.189.22 ಕೋಟಿ(ನೂರಾ ಎಂಬತ್ತೊಂಬತ್ತು ಕೋಟಿ ಇಪ್ಪತ್ತೆರಡು ಲಕ್ಷ ರೂಪಾಯಿಗಳು ಮಾತ್ರ) ಮೊತ್ತದ ವಿವರವಾದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಹಾಗೂ ಪ್ರಸಕ್ತ ಸಾಲಿನಲ್ಲಿ ಸದರಿ ಯೋಜನೆಯ ವೆಚ್ಚವನ್ನು ರೂ.140.00 (ನೂರಾ ನಲವತ್ತು ಕೋಟಿಗಳು ಮಾತ್ರ) ಕೋಟಿಗಳಿಗೆ ಸೀಮಿತಗೊಳಿಸುವುದು.

ಈ ಆದೇಶವನ್ನು ಕರ್ನಾಟಕ ಸರ್ಕಾರದ (ವ್ಯವಹಾರಗಳ ನಿರ್ವಹಣೆ) ನಿಯಮಗಳು, 1977ರ ಭಾಗ-1 ನಿಯಮ-17 ರ ಉಪನಿಯಮ-2 ರ ಪರಂತುಕದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಉಪ ಕಾರ್ಯದರ್ಶಿಗಳು (ಸಚಿವ ಸಂಪುಟ) ಪ್ರಕರಣ ಸಂಖ್ಯೆ 593/2019, ದಿನಾಂಕ:22.10.2019.
5. ಮಾನ್ಯ ಮುಖ್ಯ ಮಂತ್ರಿಗಳ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾಫಿಬೋರ್ಡ್ ಕಟ್ಟಡ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ ಕೇಂದ್ರ ವಲಯ, ಮುನಿರಾಬಾದ್, ಕೊಪ್ಪಳ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.